# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 243 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಕವಟಗಿ ಮಠ ಮಹಾಂತೇಶ ಮಲ್ಲಿಕಾರ್ಜುನ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.09.2020. |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ, ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಾಹನಗಳಿಗೆ ಪೂರೈಕೆಯಾಗುತ್ತಿರುವ ಇಂಧನದಲ್ಲಿ ಕಲಬೆರಕೆಯಾಗುತ್ತಿರುವುದೆಂಬ ಕೂಗು ಕೇಳಿ ಬರುತ್ತಿದ್ದು, ಈ ಕುರಿತು ಸರ್ಕಾರದ ನಿಲುವೇನು; | ರಾಜ್ಯದಲ್ಲಿರುವ ಎಲ್ಲಾ ಪೆಟ್ರೋಲ್ ಬಂಕ್‌ಗಳ ತಪಾಸಣೆಯನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿನ ಅಧಿಕಾರಿಗಳಿಂದ ಕೈಗೊಳ್ಳಲಾಗುತ್ತಿದೆ. ಇಂಧನದಲ್ಲಿ ಕಲಬೆರಕೆಯಾಗುತ್ತಿದೆ ಎಂಬ ಬಗ್ಗೆ ಸಾರ್ವಜನಿಕರಿಂದ ದೂರುಗಳು ಸ್ವೀಕೃತವಾದಲ್ಲಿ ಈ ಬಗ್ಗೆ ಅಗತ್ಯ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಆ) | ಇಂಧನ ಕಲಬೆರಕೆಯನ್ನು ಕಂಡುಹಿಡಿಯಲು ಸರ್ಕಾರಕ್ಕಿರುವ ಮಾನದಂಡಗಳೇನು; | ಇಂಧನ ಕಲಬೆರಕೆಯನ್ನು ಕಂಡುಹಿಡಿಯಲು Motor spirit & high Speed Diesel (Regulation of supply & Distribution & prevention of Malpractices) Order-1998 ರಡಿ ಗುಣ ಮಟ್ಟವನ್ನು ನಿಯಂತ್ರಿಸಲು ಪೆಟ್ರೋಲ್ ಹಾಗೂ ಡೀಸೆಲ್‌ಗಳ ಸಾಂದ್ರತೆ (Density)ಯನ್ನು ಪರೀಕ್ಷಿಸಲಾಗುತ್ತದೆ ಹಾಗೂ ಸ್ಯಾಂಪಲ್ ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಲಾಗುತ್ತದೆ. ಸ್ಥಳದಲ್ಲಿಯೇ ಲಿಟಮಸ್ ಪೇಪರ್ ಪರೀಕ್ಷೆ ಮಾಡುವುದು ಕೂಡ ಗುಣಮಟ್ಟ ನಿಯಂತ್ರಣದ ಮಾನದಂಡವಾಗಿದೆ. |
| ಇ) | ಕಳೆದ ಮೂರು ವರ್ಷಗಳ ಅವಧಿಯಲ್ಲಿ ಇಂತಹ ಕಲಬೆರಕೆಯ ಎಷ್ಟು ಪ್ರಕಣಗಳನ್ನು ದಾಖಲು ಮಾಡಿಕೊಳ್ಳಲಾಗಿದೆ; | ಕಳೆದ ಮೂರು ವರ್ಷಗಳಲ್ಲಿ ಒಂದು ಪ್ರಕರಣ ಕೊಪ್ಪಳದಲ್ಲಿ ದಾಖಲಾಗಿರುತ್ತದೆ. |
| ಈ) | ದಾಖಲಾದ ಪ್ರಕರಣಗಳಲಿ ಶಿಕ್ಷೆಗೆ ಒಳಪಟ್ಟಿರುವ ಪ್ರಕರಣಗಳ ಸಂಖ್ಯೆ ಎಷ್ಟು; | ಕೊಪ್ಪಳದಲ್ಲಿ ದಾಖಲಾಗಿರುವ ಒಂದು ಪ್ರಕರಣವು ವಿಚಾರಣೆ ಹಂತದಲ್ಲಿ ಇರುತ್ತದೆ. |
| ಉ) | ಇಂಧನ ಕಲಬೆರಕೆ ವ್ಯವಹಾರವನ್ನು ನಿಲ್ಲಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ? (ಮಾಹಿತಿ ನೀಡುವುದು) | Indian Oil Corporation, Bharath Petroleum Corporation ಹಾಗೂ Hindustan Petroleum Corporation ತೈಲ ನಿಗಮಗಳ ಸೇಲ್ಸ್ ಆಫೀಸರ್‌ಗಳು ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾಗಳ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ತಪಾಸಣೆಯನ್ನು ಕೈಗೊಂಡು ಅನುಮಾನಾಸ್ಪದ ಕಂಡು ಬಂದಲ್ಲಿ ಸ್ಯಾಂಪಲ್ ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಿ, ಪ್ರಯೋಗಾಲಯದ ವರದಿಯ ಆಧಾರದ ಮೇಲೆ ಪೆಟ್ರೋಲ್ ಹಾಗೂ ಡೀಸೆಲ್ ಬಂಕ್‌ಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಈ ಬಗ್ಗೆ ಸಾರ್ವಜನಿಕರಿಗೆ ತಿಳಿಯಪಡಿಸಲು ಪೆಟ್ರೋಲ್ ಬಂಕ್‌ನ ಆವರಣದಲ್ಲಿ ತಿಳುವಳಿಕೆ ಮೂಡಿಸುವ ಸೂಚನಾ ಭಿತ್ತಿ ಪತ್ರಗಳನ್ನು ಅಳವಡಿಸಲಾಗಿರುತ್ತದೆ. |

**ಸಂಖ್ಯೆ:** ಆನಾಸ 86 ಎಫ್.ಪಿ.ಪಿ 2020 (ಇ-ಆಫೀಸ್)

(ಸಹಿ)

**(ಕೆ. ಗೋಪಾಲಯ್ಯ)**
ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ, ಇಲಾಖಾ ಸಚಿವರು